ಆ) ರಾಜ್ಯ ಸರ್ಕಾರವು ಪ್ರಕಟಿಸಿದ ಇತರೆ ಹಿಂದುಳಿದ ವರ್ಗಗಳ ಪಟ್ಟಿಯಂತೆ ಸದರಿ ಜನಾಂಗದವರು ಮೀಸಲಾತಿಯನ್ನು ಪಡೆಯುತ್ತಿದ್ದಾರೆ

ಇ) ತತ್ಸಂಬಂಧವಾಗಿ ಕೇಂದ್ರ ಸರ್ಕಾರದೊಡನೆ ಪತ್ರ ವ್ಯವಹಾರ ಮಾಡಲಾಗುತ್ತಿದೆ ಪ್ರತ್ಯುತ್ತರ ಬಂದಿರುವುದಿಲ್ಲ ಏತನ್ಮಧ್ಯೆ, ಮೇದಾರ ಜಾತಿಯ ಬಗ್ಗೆ ಕುಲಶಾಸ್ತ್ರೀಯ ಅಧ್ಯಯನದ ಹಿನ್ನೆಲೆಯಲ್ಲಿ ಪ್ರಸ್ತಾಪಿಸಲು ಕರ್ನಾಟಕ ಅನುಸೂಚಿತ ಜಾತಿ ಅನುಸೂಚಿತ ಬುಡಕಟ್ಟುಗಳ ಆಯೋಗದಿಂದ ವರದಿಯನ್ನು ಕೋರಲಾಗಿದೆ

73 (184) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕರ್ನಾಟಕ ಪಶುವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಹಿಂಬಾಕಿ ಹುದ್ದೆಗಳಿಗೆ ಅರ್ಹತೆಯುಳ್ಳ ಅಭ್ಯರ್ಥಿಗಳ ಆಯ್ಕೆಗಾಗಿ ಪ್ರಕಟಣೆ ಹೊರಡಿಸದೇ ಇತರೆ ಅಭ್ಯರ್ಥಿಗಳಿಗೆ ಅನುಕೂಲ ಮಾಡಲು ಹೊಸ ಹುದ್ದೆಗಳಿಗೆ ಪ್ರಕಟಣೆ ಹೊರಡಿಸಿ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಹಾಗಿದ್ದಲ್ಲಿ, ಪರಿಶಿಷ್ಟ ಅಭ್ಯರ್ಥಿಗಳಿಗೆ ಇದರಿಂದಾಗುವ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) ನಿಯಮಾನುಸಾರ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರಿನಿಂದ ಪಶುವೈದ್ಯಕೀಯ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಗೊಂಡ ಬ್ಯಾಕ್‌ಲಾಗ್ ಶಿಕ್ಷಕರ ಹುದ್ದೆಗಳ ಭರ್ತಿಗೆ ಜರುಗಿಸಬೇಕಾದ ಪ್ರಕ್ರಿಯೆಯನ್ನು ಪೂರ್ತಿಗೊಳಿಸಿ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸಲಾಗಿದೆ ಈ ಪೈಕಿ ಒಬ್ಬರು ಪ್ರಾಧ್ಯಾಪಕರ ಹುದ್ದೆಗೆ ಮತ್ತು ನಾಲ್ವರು ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಹಾಜರಾಗಿರುತ್ತಾರೆ ತದನಂತರ ಸರ್ಕಾರದ ಅನುಮತಿಯಂತೆ 62 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಪ್ರಕ್ರಿಯೆ ಪೂರ್ತಿಗೊಳಿಸಿದ ನಂತರ 56 ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ಹೊರಡಿಸಲಾಗಿದ್ದು, ದಿ 17 01 2007 ರೊಳಗೆ ಸದರಿ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗಲು ಗಡುವು ನೀಡಲಾಗಿತ್ತು ಈ ಅವಧಿಯು ಪೂರ್ತಿಗೊಂಡ ನಂತರ ಸದರಿ ಪ್ರಕಟಣೆಯಲ್ಲಿ ಭರ್ತಿಯಾಗದೇ ಉಳಿಯಲಾಗುವ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಮೀಸಲಾದ ಹುದ್ದೆಗಳನ್ನು ಹಾಗೂ ಈ ಮೇಲಿನ ಹಸ್ತಾಂತರಗೊಂಡ ಬ್ಯಾಕ್‌ಲಾಗ್ ಹುದ್ದೆಗಳನ್ನು ಒಟ್ಟಾರೆಯಾಗಿ ವಿಶ್ವವಿದ್ಯಾಲಯದ ಹಣಕಾಸು ಹಾಗೂ ಕೆಲಸದ ಹಿತದೃಷ್ಟಿಯಿಂದ ನೇಮಕಾತಿ ಪ್ರಕಟಣೆಯನ್ನು ಹೊರಡಿಸಿ ಸೂಕ್ತ ಕ್ರಮ ಜರುಗಿಸಲಾಗುವುದು

ಆ) ಈ ದಿಸೆಯಲ್ಲಿ ಪರಿಶಿಷ್ಟ ಅಭ್ಯರ್ಥಿಗಳಿಗೆ ಯಾವುದೇ ರೀತಿಯಾದ ಅನ್ಯಾಯವಾಗುವುದಿಲ್ಲ